ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 3/7/2020

ಸಂ.ಕ. 3/7/2020

# ಮೂರ್ತಿ ನೇಮಕಕ್ಕೆ ಹೈಕೋರ್ಟ್ ಆದೇಶ

**ಸಂ.ಕ. ಸಮಾಚಾರ ಬೆಂಗಳೂರು**

ವಿಧಾನಸಭಾ ಕಾರ್ಯದರ್ಶಿ ಹುದ್ದೆಯಿಂದ ಅಮಾನತುಗೊಂಡಿದ್ದ ಎಸ್. ಮೂರ್ತಿಯವರನ್ನು ಮೂರು ವಾರದೊಳಗೆ ಮರುನೇಮಕ ಮಾಡಬೇಕು ಎಂದು ಹೈಕೋರ್ಟ್ ಆದೇಶ ಹೊರಡಿಸಿದೆ.

ಮೂರ್ತಿ ಅಮಾನತುಗೊಳಿಸಿ ವಿಧಾನಸಭೆ ವಿಶೇಷ ಮಂಡಳಿ ಹೊರಡಿಸಿರುವ ಆದೇಶ ನಿಯಮಾನುಸಾರವಾಗಿಲ್ಲ, ಶಿಸ್ತುಕ್ರಮ ವಿಚಾರಣಾ ಸಮಿತಿಯ ಫಲಿತಾಂಶದ ಆಧಾರದ ಮೇಲೆ ಅವರನ್ನು ಮರುನೇಮಕ ಮಾಡಿಕೊಳ್ಳಬೇಕು ಎಂದು ನ್ಯಾ. ಪಿ.ಬಿ. ಭಜಂತ್ರಿ ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ತಮ್ಮನ್ನು ಅಮಾನತುಪಡಿಸಿದ ವಿಧಾನಸಭೆ ವಿಶೇಷ ಮಂಡಳಿಯ ಆದೇಶ ರದ್ದುಪಡಿಸುವಂತೆ ಕೋರಿ ಎಸ್.ಮೂರ್ತಿ ಸಲ್ಲಿಸಿದ್ದ ತಕರಾರು ಅರ್ಜಿಯ ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ಗುರುವಾರ ಪ್ರಕಟಿಸಲಾಗಿದೆ. ಸರ್ಕಾರಿ ನೌಕರರನ್ನು ಅಮಾನತುಪಡಿಸಿದ ಆರು ತಿಂಗಳ ಒಳಗೆ ಅವರ ವಿರುದ್ಧದ ಆರೋಪಗಳ ತನಿಖೆ ಪೂರ್ಣಗೊಳಿಸಬೇಕು. ಒಂದೊಮ್ಮೆ ತನಿಖೆ ಆರು ತಿಂಗಳಲ್ಲಿ ಪೂರ್ಣ ಮಾಡದಿದ್ದರೆ, ಅವರನ್ನು ಸೇವೆಗೆ ಮರು ನೇಮಕ ಮಾಡಬೇಕು. ಈ ಪ್ರಕರಣದಲ್ಲಿ ಒಂದೂವರೆ ವರ್ಷ ಕಳೆದರೂ ತನಿಖೆ ಪೂರ್ಣಗೊಳಿಸಿಲ್ಲ. 2019 ಫೆ.2ರಂದು ಎರಡು ವಾರದೊಳಗೆ ವಿವರಣೆ ನೀಡುವಂತೆ ಅರ್ಜಿದಾರರಿಗೆ ಸೂಚಿಸಲಾಗಿತ್ತು. ಅರ್ಜಿದಾರರು ವಿವರಣೆ ನೀಡುವ ಮುನ್ನವೇ 2019ರ ಫೆ.26ರಂದು ವಿಚಾರಣಾಧಿಕಾರಿಯನ್ನು ನೇಮಕ ಮಾಡಲಾಗಿದೆ. 2019 ಮೇ 27ರಂದು ಅರ್ಜಿದಾರರರು ತಮ್ಮ ವಿರುದ್ಧದ ಆರೋಪಗಳಿಗೆ ಉತ್ತರ ನೀಡಿದ್ದಾರೆ. ವಿಚಾರಣಾ ಸಮಿತಿಯು ಅರ್ಜಿದಾರರನ್ನು ವಿವರಣೆಗಳನ್ನು ಪರಿಗಣಿಸಿಲ್ಲ ಎಂಬುದು ದಾಖಲೆಗಳಿಂದ ಗೊತ್ತಾಗಲಿದೆ ಎಂದು ತೀರ್ಪಿನಲ್ಲಿ ತಿಳಿಸಲಾಗಿದೆ. 2016 ಹಾಗೂ 2017ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದ ಅಧಿವೇಶನಕ್ಕೆ ಸಂಬಂಧಿಸಿದಂತೆ ಕೈಗೊಳ್ಳಲಾದ ಕಾಮಗಾರಿ ಹಾಗೂ ಇತರೆ ಖರ್ಚು ವೆಚ್ಚಗಳಲ್ಲಿ ಅವ್ಯವಹಾರ ನಡೆಸಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿರುವ ಶಾಸಕಾಂಗದ ವಿಶೇಷ ಮಂಡಳಿಯ ಆದೇಶದ ಅನುಸಾರ ಎಸ್.ಮೂರ್ತಿಯವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿತ್ತು.